# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 692
2. ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ.ಮೋಹನ್ ಕುಮಾರ್ ಕೊಂಡಜ್ಜಿ. (ನಾಮನಿರ್ದೇಶನ ಹೊಂದಿದವರು)
3. ಉತ್ತರಿಸಬೇಕಾದ ಸಚಿವರು : ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು
4. ಉತ್ತರಿಸಬೇಕಾದ ದಿನಾಂಕ : 23-12-2022

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ತೋಟಗಾರಿಕೆ ಇಲಾಖೆಯಿಂದ ನರೇಗಾ ಯೋಜನೆಯಡಿ ಕಳೆದ 5 ವರ್ಷಗಳಲ್ಲಿ ಕೈಗೆತ್ತಿಗೊಳ್ಳ ಲಾಗಿರುವ ಫಲಾನುಭವಿ ಆಧಾರಿತ ಯೋಜನೆಗಳು ಯಾವುವು; ಈ ಯೋಜನೆಗಳಿಗೆ ಬಿಡುಗಡೆಯಾದ ಅನುದಾನ ವೆಷ್ಟು; ಇದರಡಿ ಪ್ರಯೋಜನ ಪಡೆದಿರುವ ಫಲಾನುಭವಿ/ಗಳ ಸಂಖ್ಯೆ ಎಷ್ಟು;(ಸಂಪೂರ್ಣ ವಿವರ ನೀಡುವುದು) | ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ತೋಟಗಾರಿಕೆ ಇಲಾಖೆಯಿಂದ ನರೇಗಾ ಯೋಜನೆಯಡಿ ಕಳೆದ 5 ವರ್ಷಗಳಲ್ಲಿ ಬಹುವಾರ್ಷಿಕ ತೋಟಗಾರಿಕೆ ಬೆಳೆಗಳ ಪ್ರದೇಶ ವಿಸ್ತರಣೆ ಮತ್ತು ತೆಂಗು ಪುನಃಶ್ಚೇತನ ಕಾರ್ಯಕ್ರಮಗಳನ್ನು ಫಲಾನುಭವಿ ಆಧಾರಿತ ಯೋಜನೆಗಳಾಗಿ ಕೈಗೆತ್ತಿಕೊಳ್ಳಲಾಗಿದೆ.ಈ ಯೋಜನೆಗಳಿಗೆ 1978.43 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ಇದರಡಿ ಒಟ್ಟು 8519 ಫಲಾನುಭವಿಗಳು ಪ್ರಯೋಜನ ಪಡೆದಿರುತ್ತಾರೆ. ವಿವರ ಕೆಳಗಿನಂತಿವೆ. |

| ವರ್ಷ | ಫಲಾನುಭವಿಗಳ ಸಂಖ್ಯೆ | ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 2018-19 | 378 | 72.77 |
| 2019-20 | 623 | 122.53 |
| 2020-21 | 1798 | 409.41 |
| 2021-22 | 3889 | 947.86 |
| 2022-23 | 1831 | 425.86 |
| ಒಟ್ಟು | 8519 | 1978.43 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಆ) | ತೋಟಗಾರಿಕೆ ಇಲಾಖೆಯಿಂದ ನರೇಗಾ ಯೋಜನೆಯಡಿ ಕಾಮಗಾರಿಗಳನ್ನು ನಡೆಸದೆ ಇದ್ದರೂ ಸಹ ಕಾಮಗಾರಿ ಗಳನ್ನು ಪೂರ್ಣಗೊಳಿ ಸಲಾಗಿದೆ ಎಂದು ನಕಲಿ ದಾಖಲೆಗಲನ್ನು ಸೃಷ್ಟಿಸಿ ಸರ್ಕಾರದ ಹಣವನ್ನು ದುರುಪಯೋಗ ಮಾಡಿಕೊಂಡಿ ರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ, ಸಂಬಂಧಪಟ್ಟವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು) | ಸರ್ಕಾರದ ಗಮನಕ್ಕೆ ಬಂದಿದೆ.<br>2021-22 ನೇ ಸಾಲಿನಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಬಾಗೂರು ಹೋಬಳಿ,ಕೆಂಬಾಳು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಕ್ಕಿಹಳ್ಳಿ ಗ್ರಾಮದಲ್ಲಿ ಹಾಗೂ ಶ್ರವಣಬೆಳಗೊಳ ಹೋಬಳಿ, ಬೆಕ್ಕ ಗ್ರಾಮ ಪಂಚಾಯಿತಿಯ ಬೆಕ್ಕ ಗ್ರಾಮದಲ್ಲಿ ಕಾಮಗಾರಿಗಳನ್ನು ಅನುಷ್ಠಾನಿಸದೇ ಕೂಲಿ ಪಾವತಿಸಿ ದೂರಪಯೋಗ ಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವ ಹಿನ್ನಲೆಯಲ್ಲಿ ಕಾಮಗಾರಿಗಳನ್ನು ಪರಿಶೀಲನೆ ಮಾಡಲು ಹಾಸನ ಜಿಲ್ಲಾ ಪಂಚಾಯತ್ ವತಿ ನಿಂದ ಅಧಿಕಾರಿ/ಸಿಬ್ಬಂಧಿಗಳ ತನಿಖಾ ತಂಡವನ್ನು ರಚಿಸಿ ಪರಿಶೀಲನೆ ಮಾಡಲಾಗಿದೆ. ಈ ಸಿಬ್ಬಂದಿಗೆ ಕಾರಣ ಕೇಳಿ ನೋಟೀಸ್ ಜಾರಿಮಾಡಲಾಗಿದೆ.<br>ಚನ್ನರಾಯಪಟ್ಟಣ ತಾಲ್ಲೂಕಿನ ತೋಟಗಾರಿಕೆ ಇಲಾಖೆ ಕಾಮಗಾರಿಗಳಲ್ಲಿ, ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಅನುಷ್ಠಾನವಾಗುತ್ತಿರುವ ಕಾಮಗಾರಿಗಳನ್ನು ಸಮರ್ಪಕವಾಗಿ ಕಾರ್ಯ ನಿರ್ವಹಿಸದೇ ವಿಳಂಭವಾಗುತ್ತಿರುವ ಬಗ್ಗೆ ಸಾರ್ವಜನಿಕರು ಮೌಖಿಕವಾಗಿ ದೂರು ನೀಡಿದ ಅನ್ವಯ ಕಾರ್ಯ ನಿರ್ವಹಣಾಧಿಕಾರಿಗಳು ತಾಲ್ಲೂಕು ಪಂಚಾಯಿತಿ, ಚನ್ನರಾಯಪಟ್ಟಣ ರವರು ತಾಕು ಪರಿಶೀಲನೆ ನಡೆಸಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು (ಜಿ.ಪಂ.), ಹಾಸನ, ರವರಿಗೆ ವರದಿ ನೀಡಿರುತ್ತಾರೆ.<br>ಶ್ರೀ ರವಿನಾಯ್ಕ, ಸಹಾಯಕ ತೋಟಗಾರಿಕೆ ಅಧಿಕಾರಿ,ಹಿರಿಯ ಸಹಾಯಕ ನಿರ್ದೇಶಕರ ಕಛೇರಿ,ಚನ್ನರಾಯಪಟ್ಟಣ ತಾಲ್ಲೂಕು ಇವರನ್ನು ಬೇಲೂರು ತಾಲ್ಲೂಕು ಚೀಲನಾಯಕನ ಹಳ್ಳಿ ತೋಟಗಾರಿಕೆ ಕ್ಷೇತ್ರಕ್ಕೆ ಹಾಗೂ ಶ್ರೀ ರಂಗಸ್ವಾಮಿ ಕೆ.ಹೆಚ್., ಸಹಾಯಕ ತೋಟಗಾರಿಕೆ ಅಧಿಕಾರಿ(ಪ್ರಭಾರ), ಶ್ರವಣ ಬೆಳಗೊಳ ಹೋಬಳಿ, ತೋಟಗಾರಿಕೆ, ಇಲಾಖೆ ಇವರನ್ನು ಹಾಸನ ತಾಲ್ಲೂಕು ಸೋಮನಹಳ್ಳಿ ಕಾವಲು ತೋಟಗಾರಿಕಾ ಕ್ಷೇತ್ರಕ್ಕೆ ಆಡಳಿತಾತ್ಮಕ ಹಿತದೃಷ್ಟಿಯಿಂದ ತಾತ್ಕಾಲಿಕವಾಗಿ ಮುಂದಿನ ಆದೇಶದವರೆಗೆ ಕರ್ತವ್ಯ ನಿರ್ವಹಿಸಲು ನಿಯೋಜನೆ ಮಾಡಿ ಆದೇಶಿಸಿದೆ. |

No. HORTI/590/HGM/2022

(ಮುನಿರತ್ನ)
ತೋಟಗಾರಿಕೆ ಮತ್ತು ಯೋಜನೆ, ಕಾರ್ಯಕ್ರಮ
ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು